# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಾರನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

## ಮಂಗಳವಾರ, ದಿನಾಂಕ:22ನೇ ಫೆಬ್ರವರಿ, 2022

## (ಸಮಯ: ಬೆಳಗ್ಗೆ: 11.00 ಗಂಟೆಗೆ)

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

ಆ) **<u>ತಡೆಹಿಡಿಯಲಾದ ಪ್ರಶ್ನೆ:</u>**

| | |
|---|---|
| 3ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಸಿ.ಎನ್. ಮಂಜೇಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 42 (244) | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

## ೦2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.**

01. ಕರ್ನಾಟಕ ಸಿವಿಲ್ ಸೇವೆಗಳ (2011ನೇ ಸಾಲಿನ ಗೆಜೆಟೆಡ್ ಪ್ರೊಬೇಷನರರ ಆಯ್ಕೆ ಮತ್ತು ನೇಮಕಾತಿಯ ಸಿಂಧುಗೊಳಿಸುವಿಕೆ) ವಿಧೇಯಕ, 2022

02. ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ, 2022

03. ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕ, 2022

04. ಕ್ರಿಮಿನಲ್ ಕಾನೂನು ತಿದ್ದುಪಡಿ ಅಧ್ಯಾದೇಶ, 1944 (ಕರ್ನಾಟಕ ತಿದ್ದುಪಡಿ) ವಿಧೇಯಕ, 2022

## 3. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

ಅ. ಕರ್ನಾಟಕ ಸಿವಿಲ್ ಸೇವೆಗಳ (2011ನೇ ಸಾಲಿನ ಗೆಜೆಟೆಡ್ ಪ್ರೊಬೇಷನರರ ಆಯ್ಕೆ ಮತ್ತು ನೇಮಕಾತಿಯ ಸಿಂಧುಗೊಳಿಸುವಿಕೆ) ವಿಧೇಯಕ, 2022

**ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ಸಿವಿಲ್ ಸೇವೆಗಳ (2011ನೇ ಸಾಲಿನ ಗೆಜೆಟೆಡ್ ಪ್ರೊಬೇಷನರರ ಆಯ್ಕೆ ಮತ್ತು ನೇಮಕಾತಿಯ ಸಿಂಧುಗೊಳಿಸುವಿಕೆ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಆ. ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ, 2022

**ಶ್ರೀ ಆರ್. ಅಶೋಕ್ (ಮಾನ್ಯ ಕಂದಾಯ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಇ. ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕ, 2022

**ಶ್ರೀ ಆರ್. ಅಶೋಕ್ (ಮಾನ್ಯ ಕಂದಾಯ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಈ. ಕ್ರಿಮಿನಲ್ ಕಾನೂನು ತಿದ್ದುಪಡಿ ಅಧ್ಯಾದೇಶ, 1944 (ಕರ್ನಾಟಕ ತಿದ್ದುಪಡಿ) ವಿಧೇಯಕ, 2022

**ಶ್ರೀ ಆರಗ ಜ್ಞಾನೇಂದ್ರ (ಮಾನ್ಯ ಗೃಹ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕ್ರಿಮಿನಲ್ ಕಾನೂನು ತಿದ್ದುಪಡಿ ಅಧ್ಯಾದೇಶ, 1944 (ಕರ್ನಾಟಕ ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 04. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ

"2022ನೇ ಫೆಬ್ರವರಿ, 14ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:15.02.2022ರಂದು **ಶ್ರೀ ಅರುಣ ಶಹಾಪುರ** ರವರು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ:

ಎರಡನೇ ದಿನ

## 05. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರು ಬೆಂಗಳೂರಿನ ಐ.ಟಿ.ಐ. ಕಾರ್ಖಾನೆಯಲ್ಲಿ ಸುಮಾರು 30 ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ 80 ಕಾರ್ಮಿಕರನ್ನು ಕಾನೂನು ಬಾಹಿರವಾಗಿ ಸೇವೆಯಿಂದ ವಜಾ ಮಾಡಿರುವ ಕುರಿತು ಮಾನ್ಯ ಕಾರ್ಮಿಕ ಸಚಿವರ ಗಮನ ಸೆಳೆಯುವುದು.

೦2. **ಡಾ. ವೈ.ಎ. ನಾರಾಯಣಸ್ವಾಮಿ** ಅವರು ಬೆಂಗಳೂರು ನಗರದಲ್ಲಿ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳು ಕಾನೂನು ಬಾಹಿರ ಚಟುವಟಿಕೆಗಳನ್ನು ನಡೆಸುತ್ತಿರುವುದರಿಂದ ಬೆಂಗಳೂರಿನ ನಾಗರೀಕರ ನೆಮ್ಮದಿ ಕೆಡಿಸಿರುವ ವಿಷಯದ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

೦3. **ಶ್ರೀಯುತರುಗಳಾದ ಕೆ.ಎ. ತಿಪ್ಪೇಸ್ವಾಮಿ, ಮರಿತಿಬ್ಬೇಗೌಡ ಮತ್ತು ಕೆ.ಟಿ. ಶ್ರೀಕಂಠೇಗೌಡ,** ಅವರುಗಳು ರಾಜ್ಯದಲ್ಲಿರುವ ವಿದ್ಯುತ್ ವಿತರಣಾ ಕಂಪನಿಗಳಿಂದ ವಿವಿಧ ಉತ್ಪಾದನಾ ಕಂಪನಿಗಳಿಗೆ ಬಿಲ್ಲು ಪಾವತಿ ಮಾಡುವ ಬಗ್ಗೆ ಹಾಗೂ ಅಸಂಪ್ರದಾಯಕ ಇಂಧನ ಮೂಲಗಳಾದ ಸೌರಶಕ್ತಿ, ಪವನಶಕ್ತಿ, ಕಿರು-ಜಲವಿದ್ಯುತ್ ಉತ್ಪಾದನೆಯ ನಿರ್ವಹಣೆ ಮತ್ತು ಉಸ್ತುವಾರಿ ವಹಿಸುವಲ್ಲಿ ಇಂಧನ ಇಲಾಖೆ ವಿಫಲವಾಗಿರುವ ಕುರಿತು ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

೦4. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲೆಯ ಅರೆಹಳ್ಳಿ ಗ್ರಾಮದಲ್ಲಿರುವ ಸರ್ಕಾರಿ ಕಾನೂನು ಕಾಲೇಜಿಗೆ ಬೋಧಕ/ ಬೋಧಕೇತರ ಸಿಬ್ಬಂದಿ ಹಾಗೂ ವಸತಿ ವ್ಯವಸ್ಥೆಯನ್ನು ಒಳಗೊಂಡಂತೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕುರಿತು ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

೦5. **ಶ್ರೀಯುತರುಗಳಾದ;- ಸುನೀಲ್‌ಗೌಡ ಪಾಟೀಲ್, ಡಿ.ಎಸ್. ಅರುಣ್ ಮತ್ತು ಚನ್ನರಾಜ್ ಬಸವರಾಜ್ ಹಟ್ಟಿಹೊಳಿ** ಅವರುಗಳು ಸ್ಥಳೀಯ ಸಂಸ್ಥೆಗಳ ಚುನಾಯಿತ ಸದಸ್ಯರ ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ಸಿಬ್ಬಂದಿಗಳ ಗೌರವಧನ ಹೆಚ್ಚಳ ಮಾಡುವ ಹಾಗೂ ಕೇರಳ ಮಾದರಿಯ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

..4..

೦6. **ಶ್ರೀ ರಾಜೇಂದ್ರ ರಾಜಣ್ಣ** ಅವರು ಬಯಲು ಸೀಮೆಯ ಏಳು ಜಿಲ್ಲೆಗಳಿಗೆ ಕುಡಿಯುವ ನೀರು ಪೂರೈಸುವ ಎತ್ತಿನ ಹೊಳೆ ಯೋಜನೆಯ ಅಭಿವೃದ್ಧಿ ಕಾಮಗಾರಿಗಳು ಸ್ಥಗಿತಗೊಂಡಿರುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಶ್ರೀ ಪುಟ್ಟಣ್ಣ** ಅವರು ಖಾಸಗಿ ಅನುದಾನಿತ/ ಅನುದಾನರಹಿತ ಶಾಲೆಗಳ ಪ್ರಥಮ ಮಾನ್ಯತೆ ಹಾಗೂ ನವೀಕರಣ ನಿಯಮಗಳನ್ನು ಸರಳೀಕರಣಗೊಳಿಸುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಎಸ್. ರವಿ** ಅವರು ರಾಜ್ಯದಲ್ಲಿ ಮಂಜೂರಾದ ಹೊಸ ತಾಲ್ಲೂಕುಗಳಿಗೆ ಅವಶ್ಯವಿರುವ ಮೂಲಭೂತ ಸೌಕರ್ಯಗಳಿಗಾಗಿ ಅಗತ್ಯ ಅನುದಾನಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಯು.ಬಿ. ವೆಂಕಟೇಶ್** ಅವರು ರಾಜ್ಯದಲ್ಲಿ ಬಿಟ್ ಕಾಯಿನ್ ಹಗರಣ ಕುರಿತು ಆಗಿರುವ ತನಿಖಾ ಪ್ರಗತಿ ಹಾಗೂ ಅದರ ಬೆಳವಣಿಗೆಗಳ ವಿಷಯದ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ ಹಾಗೂ ಶ್ರೀ ಮರಿತಿಬ್ಬೇಗೌಡ** ಅವರುಗಳು ಚಿಕ್ಕಬಳ್ಳಾಪುರ ಜಿಲ್ಲೆ, ಚಿಂತಾಮಣಿ ತಾಲ್ಲೂಕು, ಕೋಟಗಲ್ ಗ್ರಾಮದ ಸರ್ವೇ ನಂ.11ರಲ್ಲಿ ಜಿ.ಟಿ.ಬಿ. ಕ್ರಷರ್ಸ್, ಇವರು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳೊಂದಿಗೆ ಶಾಮೀಲಾಗಿ ಕಾನೂನು ಬಾಹಿರವಾಗಿ ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿಕೊಂಡಿರುವ ಕುರಿತು ಪ್ರಸ್ತಾಪಿಸುವುದು.

೦5. **ಶ್ರೀ ಶಶೀಲ್ ಜಿ. ನಮೋಶಿ** ಅವರು ಇತ್ತೀಚಿಗೆ ರಾಜ್ಯಾದ್ಯಂತ ಹೆಚ್ಚುತ್ತಿರುವ ಗಾಂಜಾ ಮತ್ತು ಡ್ರಗ್ಸ್‌ಗಳ ಮಾರಾಟದಿಂದ ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಮಾದಕ ವ್ಯಸನಿಗಳಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| **ಶ್ರೀಯುತರುಗಳಾದ;-**<br>**ಕೆ.ಎ. ತಿಪ್ಪೇಸ್ವಾಮಿ, ಮರಿತಿಬ್ಬೇಗೌಡ ಮತ್ತು ಕೆ.ಟಿ. ಶ್ರೀಕಂಠೇಗೌಡ ಅವರುಗಳು** | ಭಾರತೀಯ ಆಡಳಿತ ಸೇವಾ ನಿಯಮಗಳು (ವೃಂದ) 1954ಗಳಿಗೆ ಪ್ರಸ್ತಾಪಿಸಿರುವ ತಿದ್ದುಪಡಿಯಲ್ಲಿ ಕೇಂದ್ರ ಸರ್ಕಾರ, ರಾಜ್ಯ ಸರ್ಕಾರಗಳ ಸಹಮತಿ ಇಲ್ಲದಿದ್ದರೂ ಅಧಿಕಾರಿಗಳನ್ನು ಹುದ್ದೆಗಳಿಂದ ಬಿಡುಗಡೆ ಮಾಡಿ ಕೇಂದ್ರ ಸರ್ಕಾರದ ಸೇವೆ ಸಲ್ಲಿಸಬೇಕೆಂಬ ನಿಬಂಧನೆ ತಂದಿರುವ ಕುರಿತು |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**